ಸಾರ್ವಜನಿಕ ಶಿಕ್ಷಣ ಇಲಾಖೆ
ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ಹಾಗೂ
ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು
6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-03. ದೂರವಾಣಿ ಸಂಖ್ಯೆ: 23341615, 23562283, 29720300
e-mail: ksqaacntsenmms@gmil.com

ಸಂಖ್ಯೆ:ಕೆ3/NTSE-NMMSಪರೀಕ್ಷೆ/ 10/2021-22 ದಿನಾಂಕ:08.11.2021

# ಸುತ್ತೋಲೆ

ವಿಷಯ:-2021-22ನೇ ಸಾಲಿನ ರಾಷ್ಟ್ರೀಯ ಪ್ರತಿಭಾನ್ವೇಷಣೆ (National Talent Search Examination – NTSE) ಪರೀಕ್ಷೆಗೆ Online ಮೂಲಕ ಅರ್ಜಿ ಸಲ್ಲಿಸುವ ಬಗ್ಗೆ.

ಉಲ್ಲೇಖ:-1. NCERT ನವದೆಹಲಿ ರವರ ಪತ್ರ ಸಂಖ್ಯೆ: F1-11/2021/ESD/NTS-I/, Dated:10.09.2021.
2. NTS ಪರೀಕ್ಷೆ ಸಂಬಂಧ NCERT ನವದೆಹಲಿ ರವರು Liaison Officer ಗಳಿಗೆ ದಿನಾಂಕ:15.09.2021 ರಂದು ಆಯೋಜಿಸಿದ ಆನ್‌ಲೈನ್ ಸಭೆಯ ನಡಾವಳಿ.
3. ಈ ಕಛೇರಿಯ ಸಮಸಂಖ್ಯೆ ಪತ್ರ ದಿನಾಂಕ: 23.09.2021
4. ಮಾನ್ಯ ಆಯುಕ್ತರು.ಸಾ.ಶಿ.ಇ ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡಾವಳಿ ದಿನಾಂಕ:28.10.2021

***********

2021-22ನೇ ಸಾಲಿನಲ್ಲಿ ರಾಷ್ಟ್ರೀಯ ಪ್ರತಿಭಾನ್ವೇಷಣೆ (National Talent Search Examination – NTSE) ಪರೀಕ್ಷೆಯನ್ನು ಉಲ್ಲೇಖ-1ರಲ್ಲಿನ NCERT ನವದೆಹಲಿ ರವರ ಮಾರ್ಗಸೂಚಿಯಂತೆ ನಡೆಸಲು Online ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸದರಿ ಪರೀಕ್ಷೆಯನ್ನು 2021-22ನೇ ಸಾಲಿನಲ್ಲಿ ಸರ್ಕಾರಿ, ಸ್ಥಳೀಯ ಸಂಸ್ಥೆಗಳ ಶಾಲೆಗಳು, ಅನುದಾನಿತ, ಅನುದಾನರಹಿತ ಪ್ರೌಢಶಾಲೆಗಳಲ್ಲಿ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಮತ್ತು ದೂರ ಶಿಕ್ಷಣದಲ್ಲಿ 10ನೇ ತರಗತಿಗೆ ನೋಂದಾಯಿಸಿಕೊಂಡಿರುವ ಹಾಗೂ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ NTSನ ಮೊದಲನೇ ಹಂತದ ಪರೀಕ್ಷೆಯನ್ನು **ದಿನಾಂಕ:16.01.2022** ರಂದು ನಡೆಸಲಾಗುವುದು.

ಪ್ರಸಕ್ತ ಸಾಲಿನ NTS ಪರೀಕ್ಷೆಗೆ Online ಮೂಲಕ ಅರ್ಜಿಯನ್ನು **ದಿನಾಂಕ:11.11.2021** ರಿಂದ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ವೆಬ್‌ಸೈಟ್‌ನ NTSE ಲಾಗಿನ್‌ನಲ್ಲಿ ಲಭ್ಯ ಮಾಡಲಾಗಿದೆ. ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ತಮ್ಮ ಶಾಲಾ ವಿದ್ಯಾರ್ಥಿಗಳ ಅರ್ಜಿಗಳನ್ನು ಕಡ್ಡಾಯವಾಗಿ Online ಮೂಲಕವೇ ಸಲ್ಲಿಸುವುದು.

**NTS ಪರೀಕ್ಷೆಯ ಸಂಕ್ಷಿಪ್ತ ವಿವರ:-** ಸರ್ಕಾರಿ, ಸ್ಥಳೀಯ ಸಂಸ್ಥೆಗಳ, ಅನುದಾನಿತ ಹಾಗೂ ಅನುದಾನರಹಿತ (State/CBSE/ICSE/ಇತರೆ) ಶಾಲೆಗಳಲ್ಲಿ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ಪ್ರತಿಭಾನ್ವೇಷಣಾ ಪರೀಕ್ಷೆಯನ್ನು (National Talent Search Examination -NTSE) NCERT, New Delhi ರವರ ಮಾರ್ಗಸೂಚಿಯಂತೆ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕೆ.ಎಸ್.ಕ್ಯು.ಎ.ಎ.ಸಿ ವತಿಯಿಂದ ನಡೆಸಲಾಗುವುದು. ಸದರಿ ಪರೀಕ್ಷೆಯನ್ನು ಕನ್ನಡ, ಇಂಗ್ಲೀಷ್, ಮರಾಠಿ ಹಾಗೂ ಉರ್ದು ಮಾಧ್ಯಮಗಳಲ್ಲಿ ನಡೆಸಲಾಗುತ್ತದೆ. ಈ ಪರೀಕ್ಷೆಗೆ ಅರ್ಜಿ ಸಲ್ಲಿಸುವ ಸಾಮಾನ್ಯ, ಇತರೆ ಹಿಂದುಳಿದ ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು **ಶೇ55** ರಷ್ಟು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು **ಶೇ.45 ರಷ್ಟು** ಅಂಕಗಳನ್ನು 9ನೇ ತರಗತಿಯಲ್ಲಿ ಗಳಿಸಿರಬೇಕು. **NTS ಪರೀಕ್ಷೆಯನ್ನು ಎರಡು ಹಂತದಲ್ಲಿ ನಡೆಸಲಾಗುತ್ತದೆ. ರಾಜ್ಯ ಮಟ್ಟದ ಪ್ರಥಮ ಹಂತದ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ ಅಭ್ಯರ್ಥಿಗಳಿಗೆ ರಾಷ್ಟ್ರಮಟ್ಟದ 2ನೇ** ಹಂತದ ಪರೀಕ್ಷೆಯನ್ನು NCERT ವತಿಯಿಂದ ನಡೆಸಲಾಗುತ್ತದೆ.

## ಪ್ರಥಮ ಹಂತ (First Phase):-

NTS ನ ಪ್ರಥಮ ಹಂತದ ಪರೀಕ್ಷೆಯನ್ನು ರಾಜ್ಯ ಹಂತದಲ್ಲಿ ಅರ್ಜಿ ಆಹ್ವಾನಿಸಿ ಪರೀಕ್ಷೆ ನಡೆಸಲಾಗುವುದು. ಅದರಂತೆ ಅರ್ಜಿ ಸಲ್ಲಿಸಿ ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳಲ್ಲಿ ಕೇಂದ್ರ ಸರ್ಕಾರದ ಮೀಸಲಾತಿ ನಿಯಮದಂತೆ ಸಾಮಾಜಿಕ ವರ್ಗವಾರು ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ. ಪ್ರಥಮ ಹಂತದ ಪರೀಕ್ಷೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ರಾಷ್ಟ್ರಮಟ್ಟದ 2ನೇ ಹಂತದ ಪರೀಕ್ಷೆಗೆ ಹಾಜರಾಗಲು ಅರ್ಹರಿರುತ್ತಾರೆ.

## ದ್ವಿತೀಯ ಹಂತ (Second Phase):-

ರಾಜ್ಯ ಮಟ್ಟದ ಪ್ರಥಮ ಹಂತದ NTS ಪರೀಕ್ಷೆಯಲ್ಲಿ ಅರ್ಹತೆಗಳಿಸಿದ ವಿದ್ಯಾರ್ಥಿಗಳಿಗೆ National Council of Educational Research and Training (NCERT), New Delhi ವತಿಯಿಂದ ದ್ವಿತೀಯ ಹಂತದ ರಾಷ್ಟ್ರ ಮಟ್ಟದ ಪರೀಕ್ಷೆಯನ್ನು ನಡೆಸಲಾಗುತ್ತದೆ. ದ್ವಿತೀಯ ಹಂತದ ಪರೀಕ್ಷೆಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಹನ್ನೊಂದನೇ ತರಗತಿಯಿಂದ ಉನ್ನತ ಶಿಕ್ಷಣದ ವರೆಗೂ ಶಿಷ್ಯ ವೇತನವನ್ನು NCERT ವತಿಯಿಂದ ನೀಡಲಾಗುತ್ತದೆ.

## NTS ಪರೀಕ್ಷೆಯ ಉದ್ದೇಶಗಳು :-

1. 10ನೇ ತರಗತಿಯಲ್ಲಿ ಓದುತ್ತಿರುವ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸುವುದು.
2. ವಿದ್ಯಾರ್ಥಿಗಳ ಪ್ರತಿಭೆಯನ್ನು ಪ್ರೋತ್ಸಾಹಿಸುವುದು.
3. ವಿದ್ಯಾರ್ಥಿಗಳಲ್ಲಿ ಸ್ಪರ್ಧಾತ್ಮಕ ಮನೋಭಾವವನ್ನು ಬೆಳೆಸುವುದು.
4. ವಿದ್ಯಾರ್ಥಿಗಳಿಗೆ ಆರ್ಥಿಕ ನೇರವು ನೀಡುವುದುರ ಮೂಲಕ ಮುಂದಿನ ವಿದ್ಯಾಭ್ಯಾಸಕ್ಕೆ ನೆರವಾಗುವುದು.

## ಪ್ರಥಮ ಹಂತದ (First Phase) NTS ಪರೀಕ್ಷೆಯ ಸ್ವರೂಪ:-

### ಪತ್ರಿಕೆ-1- ಬೌದ್ಧಿಕ ಸಾಮರ್ಥ್ಯ ಪರೀಕ್ಷೆ:- ( Mental Ability Test -MAT)

ಈ ಪತ್ರಿಕೆಯಲ್ಲಿ 100 ಬಹು ಆಯ್ಕೆ ಪ್ರಶ್ನೆಗಳಿರುತ್ತವೆ. ಪ್ರತಿ ಪ್ರಶ್ನೆಗೂ ಒಂದು ಅಂಕದಂತೆ 100 ಅಂಕಗಳನ್ನು ನಿಗದಿಪಡಿಸಲಾಗಿದೆ. ಈ ಪ್ರಶ್ನೆಪತ್ರಿಕೆಯು ವಿದ್ಯಾರ್ಥಿಗಳು ಕಾರಣ ನೀಡುವ, ವಿಶ್ಲೇಷಿಸುವ, ಸಂಶ್ಲೇಷಿಸುವ ಇತ್ಯಾದಿ ಸಾಮರ್ಥ್ಯಗಳನ್ನು ಅಳೆಯುವ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ.

### ಪತ್ರಿಕೆ-2-ವ್ಯಾಸಂಗಿಕ ಪ್ರವೃತ್ತಿ ಪರೀಕ್ಷೆ:-(Scholastic Aptitude Test- SAT)

ಈ ಪತ್ರಿಕೆಯಲ್ಲಿ 100 ಅಂಕಗಳಿಗೆ ಒಟ್ಟು 100 ಬಹು ಆಯ್ಕೆ ಪ್ರಶ್ನೆಗಳಿರುತ್ತವೆ. ಇವುಗಳಲ್ಲಿ 40 ಪ್ರಶ್ನೆಗಳನ್ನು ಸಾಮಾನ್ಯ ವಿಜ್ಞಾನ (ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ) ದಿಂದ, 40 ಪ್ರಶ್ನೆಗಳನ್ನು ಸಮಾಜ ವಿಜ್ಞಾನ (ಇತಿಹಾಸ, ಭೂಗೋಳ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಸಮಾಜಶಾಸ್ತ್ರ ಮತ್ತು ವ್ಯವಹಾರ ಅಧ್ಯಯನ) ಮತ್ತು 20 ಪ್ರಶ್ನೆಗಳನ್ನು ಗಣಿತ ವಿಷಯದಿಂದ ಆಯ್ಕೆ ಮಾಡಲಾಗುತ್ತದೆ. (ಪ್ರಶ್ನೆಗಳನ್ನು ಹತ್ತನೇ ತರಗತಿ ಪಠ್ಯಪುಸ್ತಕಗಳಿಂದ ಆಯ್ಕೆ ಮಾಡಲಾಗುತ್ತದೆ).

ಈ ವಿಷಯದ ಪರೀಕ್ಷೆಗೆ ಸಿದ್ಧವಾಗುವಾಗ ವಿದ್ಯಾರ್ಥಿಗಳು 10ನೇ ತರಗತಿಯ **ಪಠ್ಯವಸ್ತು** (State/CBSC/ICSE Syllabus) ಚೌಕಟ್ಟಿನಲ್ಲಿರುವ ವಿಷಯಗಳನ್ನು ಅಧ್ಯಯನ ಮಾಡಬೇಕಾಗುತ್ತದೆ.

## 2021-22 ನೇ ಸಾಲಿನ NTS ಪರೀಕ್ಷೆಗೆ ನಿಗದಿಪಡಿಸಿರುವ ಪ್ರಶ್ನೆಪತ್ರಿಕೆಗಳ ಸ್ವರೂಪ:-

| ಪರೀಕ್ಷೆ | ಒಟ್ಟು ಪ್ರಶ್ನೆಗಳು | ನಿಗದಿಪಡಿಸಿದ ಸಮಯ | ಅಂಕಗಳ ವಿಂಗಡಣೆ |
|---|---|---|---|
| ಪತ್ರಿಕೆ-1<br>ಬೌದ್ಧಿಕ ಸಾಮರ್ಥ್ಯ ಪರೀಕ್ಷೆ<br>(Mental Ability Test-MAT) | 100 | 120 ನಿಮಿಷಗಳು<br>(30 Minutes compensatory time for candidates with benchmark disabilities) | ಪ್ರತಿ ಪ್ರಶ್ನೆಗೆ ಒಂದು ಅಂಕದಂತೆ ಒಟ್ಟು 100 ಅಂಕಗಳು |
| ಪತ್ರಿಕೆ-2<br>ವ್ಯಾಸಂಗಿಕ ಪ್ರವೃತ್ತಿ ಪರೀಕ್ಷೆ<br>(Scholastic Aptitude Test- SAT) | 100 | 120 ನಿಮಿಷಗಳು<br>(30 Minutes compensatory time for candidates with benchmark disabilities) | ವಿಜ್ಞಾನ ವಿಷಯಕ್ಕೆ 40 ಅಂಕಗಳು, ಸಮಾಜ ವಿಜ್ಞಾನಕ್ಕೆ 40 ಅಂಕಗಳು, ಗಣಿತ ವಿಷಯಕ್ಕೆ 20 ಅಂಕಗಳು. ಪ್ರತಿ ಪ್ರಶ್ನೆಗೆ ಒಂದು ಅಂಕದಂತೆ ಒಟ್ಟು 100 ಅಂಕಗಳು |

## 2021–22 ನೇ ಸಾಲಿನ NTS ಪರೀಕ್ಷೆಗೆ ನಿಗದಿಪಡಿಸಿರುವ ವೇಳಾಪಟ್ಟಿ:–

| ಪ್ರಶ್ನೆ ಪತ್ರಿಕೆಗಳು | ಪರೀಕ್ಷಾ ದಿನಾಂಕ | ನಿಗದಿಪಡಿಸಿದ ಸಮಯ |
|---|---|---|
| ಪತ್ರಿಕೆ–1<br>ಬೌದ್ಧಿಕ ಸಾಮರ್ಥ್ಯ ಪರೀಕ್ಷೆ<br>(Mental Ability Test-MAT) | 16.01.2022<br>ಭಾನುವಾರ | **ಬೆಳಗ್ಗೆ 10.00 ರಿಂದ–12.00ರವರೆಗೆ**<br>(ಒಟ್ಟು 120 ನಿಮಿಷಗಳು)<br>(ವಿಕಲಚೇತನ ವಿದ್ಯಾರ್ಥಿಗಳಿಗೆ 30 ನಿಮಿಷ ಹೆಚ್ಚುವರಿ ಸಮಯ ನೀಡಲಾಗುವುದು<br>30 Minutes extra time will be given to disability students) |
| ಪತ್ರಿಕೆ–2<br>ವ್ಯಾಸಂಗಿಕ ಪ್ರವೃತ್ತಿ ಪರೀಕ್ಷೆ<br>(Scholastic Aptitude Test-SAT) | 16.01.2022<br>ಭಾನುವಾರ | **ಮಧ್ಯಾಹ್ನ 2.00ರಿಂದ– 4.00ರವರೆಗೆ**<br>(ಒಟ್ಟು 120 ನಿಮಿಷಗಳು)<br>(ವಿಕಲಚೇತನ ವಿದ್ಯಾರ್ಥಿಗಳಿಗೆ 30 ನಿಮಿಷ ಹೆಚ್ಚುವರಿ ಸಮಯ ನೀಡಲಾಗುವುದು<br>30 Minutes extra time will be given to disability students) |

## NTS ಪರೀಕ್ಷೆಯ ಅರ್ಹತಾ ಅಂಕಗಳು ಮತ್ತು ಸೀಟು ಹಂಚಿಕೆ ವಿವರ:–

NTS ಪರೀಕ್ಷೆಯಲ್ಲಿ ಸಾಮಾನ್ಯ ವರ್ಗ, ಇತರೆ ಹಿಂದುಳಿದ ವರ್ಗಗಳು ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗ (EWSs)ದ ವಿದ್ಯಾರ್ಥಿಗಳು ಶೇ.40 ರಷ್ಟು ಅರ್ಹತಾ ಅಂಕಗಳನ್ನು ಗಳಿಸಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಶೇ.32 ರಷ್ಟು ಅರ್ಹತಾ ಅಂಕಗಳನ್ನು ಗಳಿಸಬೇಕು. ಕೇಂದ್ರ ಸರ್ಕಾರದ ಮೀಸಲಾತಿ ನಿಯಮಾನುಸಾರ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುವುದು.

**ವಿದ್ಯಾರ್ಥಿ ವೇತನ:–** ಪ್ರಥಮ ಹಂತದ ರಾಜ್ಯ ಮಟ್ಟದ ಪರೀಕ್ಷೆಯಲ್ಲಿ ಅರ್ಹತೆಗಳಿಸಿದ ವಿದ್ಯಾರ್ಥಿಗಳಿಗೆ ದ್ವಿತೀಯ ಹಂತದ ರಾಷ್ಟ್ರ ಮಟ್ಟದ ಪರೀಕ್ಷೆಯನ್ನು NCERT ನವದೆಹಲಿ ರವರ ವತಿಯಿಂದ ನಡೆಸಲಾಗುತ್ತದೆ. ಅಂತಿಮವಾಗಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪ್ರಥಮ ಮತ್ತು ದ್ವಿತೀಯ ಪಿ.ಯು.ಸಿ ಹಂತದಲ್ಲಿ ಪ್ರತಿ ತಿಂಗಳು ರೂ 1,250/–ಗಳನ್ನು, ಪದವಿ ಮತ್ತು ಸ್ನಾತಕೋತ್ತರ ಪದವಿ ಹಂತದಲ್ಲಿ ರೂ 2,000/–ಗಳನ್ನು ಹಾಗೂ ಉನ್ನತ ಶಿಕ್ಷಣ ವ್ಯಾಸಂಗದ ಹಂತದಲ್ಲಿ ಯು.ಜಿ.ಸಿ ನಿಯಮಾನುಸಾರ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತದೆ.

## .2021–22 ನೇ ಸಾಲಿನ NTS ಪರೀಕ್ಷೆಯ ಶುಲ್ಕದ ವಿವರಗಳು:–

| ಸಂಸ್ಥೆಗಳು | ಅರ್ಜಿ ಶುಲ್ಕ | ಪರೀಕ್ಷಾ ಶುಲ್ಕ | |
|---|---|---|---|
| ಸರ್ಕಾರಿ, ಅನುದಾನಿತ ಹಾಗೂ ಸ್ಥಳೀಯ ಸಂಸ್ಥೆಯ ಶಾಲೆಗಳು (Government, Aided & Local body schools ) | ಇಲ್ಲ | ಸಾಮಾನ್ಯ, ಇತರೆ ಹಿಂದುಳಿದ ವರ್ಗ ಮತ್ತು ಆರ್ಥಿಕವಾಗಿ ಹಿಂದುಳಿದ ವರ್ಗ (EWSs)ದ ವಿದ್ಯಾರ್ಥಿಗಳಿಗೆ | ರೂ.75/– |
| | | ಪ.ಜಾ/ಪ.ಪಂ. ವಿದ್ಯಾರ್ಥಿಗಳಿಗೆ | ರೂ.20/– |
| ಅನುದಾನರಹಿತ ಶಾಲೆಗಳು (Unaided schools) | ಇಲ್ಲ | ಸಾಮಾನ್ಯ, ಇತರೆ ಹಿಂದುಳಿದ ವರ್ಗ ಮತ್ತು ಆರ್ಥಿಕವಾಗಿ ಹಿಂದುಳಿದ ವರ್ಗ (EWSs) ದ ವಿದ್ಯಾರ್ಥಿಗಳಿಗೆ | ರೂ.200/– |
| | | ಪ.ಜಾ/ಪ.ಪಂ. ವಿದ್ಯಾರ್ಥಿಗಳಿಗೆ | ರೂ.50/– |

## NTS ಪರೀಕ್ಷೆಯ ಅರ್ಜಿಯನ್ನು Online ಮೂಲಕ ಸಲ್ಲಿಸುವಾಗ ಮುಖ್ಯ ಶಿಕ್ಷಕರು ಗಮನಿಸಬೇಕಾದ ಅಂಶಗಳು:-

**ದಿನಾಂಕ: 11.11.2021** ರಿಂದ **NTS ಪರೀಕ್ಷೆಗೆ Online** ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಸದರಿ ಅರ್ಜಿಯು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ವೆಬ್‌ಸೈಟ್ Home page ನ NTSE Login ನಲ್ಲಿ ಲಭ್ಯವಿದ್ದು, **ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರು/ ಪ್ರಾಂಶುಪಾಲರೇ** ತಮ್ಮ ಶಾಲೆಯ ವಿದ್ಯಾರ್ಥಿಗಳ ಅರ್ಜಿಯನ್ನು Online ಮೂಲಕ ಭರ್ತಿ ಮಾಡಲು ತಿಳಿಸಿದೆ. ಅರ್ಜಿ ಭರ್ತಿ ಮಾಡಲು ಸಹಾಯವಾಗುವಂತೆ USER Manual & Flow Chart ಮಂಡಳಿಯ ವೆಬ್‌ಸೈಟ್‌ನಲ್ಲಿ ಲಭ್ಯವಿರುತ್ತದೆ. ಅರ್ಜಿ ಸಲ್ಲಿಸಲು ಕೊನೆಯ **ದಿನಾಂಕ: 30.11.2021 ಆಗಿರುತ್ತದೆ.**

**ಶಾಲೆಯ ಮುಖ್ಯ ಶಿಕ್ಷಕರು NTS ಪರೀಕ್ಷೆಗೆ Online** ಮೂಲಕ ಅರ್ಜಿ ಸಲ್ಲಿಸುವಾಗ NTSE Login ನಲ್ಲಿ ಶಾಲೆಯ U- DISE ಕೋಡ್ ಬಳಸಿಯೇ Login ಆಗುವುದು ಕಡ್ಡಾಯವಾಗಿರುತ್ತದೆ. ಕಳೆದ ಬಾರಿ KSEEB Code ಬಳಸಿ Login ಆಗುತಿದ್ದ ಶಾಲೆಯವರು ಸಹ ಈ ಬಾರಿ ಶಾಲೆಯ U- DISE ಕೋಡ್‌ಅನ್ನೇ **User Name** ಆಗಿ ಬಳಸಿ Login ಅಗುವುದು. ಮಂಡಳಿಯ ವತಿಯಿಂದ Default Password ನೀಡಲಾಗಿದ್ದು , ಮೊದಲ ಬಾರಿ ಲಾಗಿನ್ ಆಗುವಾಗ Password ಬದಲಾವಣೆ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ.

**ಉದಾ : ಶಾಲೆಯೊಂದರ** U- DISE **29310300112 ಆಗಿದ್ದಲ್ಲಿ**

**User Name : 29310300112**
Default Password : **29310300112@123**

ಮೊಬೈಲ್ ಸಂಖ್ಯೆಗೆ OTP ಬರುತ್ತದೆ. ಸದರಿ OTP **ಯನ್ನು** ಬಳಸಿ **Password ಅನ್ನು Update ಮಾಡಿಕೊಂಡು Login ಆಗಿ ಅರ್ಜಿ ಸಲ್ಲಿಸುವುದು.**

- NTS ಪರೀಕ್ಷೆಗೆ ಅರ್ಜಿ ಸಲ್ಲಿಸುವ GM, OBC, EWSs ವಿದ್ಯಾರ್ಥಿಗಳು 9ನೇ ತರಗತಿಯಲ್ಲಿ ಶೇ.55 ರಷ್ಟು ಅಂಕಗಳಿಸಿರಬೇಕು SC, ST ವಿದ್ಯಾರ್ಥಿಗಳು ಶೇ.45 ರಷ್ಟು ಅಂಕಗಳಿಸಿರಬೇಕು ಅಂತಹ ವಿದ್ಯಾರ್ಥಿಗಳ ಅರ್ಜಿಗಳನ್ನು ಮಾತ್ರ ಸಲ್ಲಿಸುವುದು.
- ಪ್ರಸ್ತುತ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಈ ಹಿಂದಿನ ತರಗತಿ ಅಂದರೆ 9ನೇ ತರಗತಿಯಲ್ಲಿ A+ ಮತ್ತು A ಗ್ರೇಡ್ ಪಡೆದ ಎಲ್ಲಾ ವಿದ್ಯಾರ್ಥಿಗಳು ಕಡ್ಡಾಯವಾಗಿ ಅರ್ಜಿ ಸಲ್ಲಿಸಲು ಅಗತ್ಯ ಕ್ರಮವಹಿಸಲು ಮಾನ್ಯ ಆಯುಕ್ತರು ಉಲ್ಲೇಖ-4 ರಲ್ಲಿ ತಿಳಿಸಿರುತ್ತಾರೆ. ಈ ಸಂಬಂಧ ತಮ್ಮ ಶಾಲೆಯಲ್ಲಿ A+ ಮತ್ತು A ಗ್ರೇಡ್ ಪಡೆದ ಎಲ್ಲಾ ವಿದ್ಯಾರ್ಥಿಗಳ ಅರ್ಜಿಯನ್ನು ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.
- ದೂರ ಶಿಕ್ಷಣ ಮಾದರಿಯಲ್ಲಿ (Open and Distance Learning (ODL) ನೋಂದಾಯಿಸಿಕೊಂಡಿರುವ ಅಭ್ಯರ್ಥಿಗಳು ಈ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅವಕಾಶವಿದ್ದು ಸದರಿ ವಿದ್ಯಾರ್ಥಿಗಳಿಗೆ ದಿನಾಂಕ:01-7-2021 ಕ್ಕೆ 18 ವರ್ಷದೊಳಗಿರಬೇಕು, ಪ್ರಥಮ ಬಾರಿಗೆ ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆಯಲು ನೋಂದಾಯಿಸಿಕೊಂಡಿರಬೇಕು ಹಾಗೂ ಯಾವುದೇ ಉದ್ಯೋಗದಲ್ಲಿರಬಾರದು.
- NTS ಪರೀಕ್ಷೆಯ ಅರ್ಜಿಯನ್ನು ಶಾಲಾ ಮುಖ್ಯಸ್ಥರು ಮಂಡಳಿಯ https://sslc.karnataka.gov.in/ ವೆಬ್‌ಸೈಟ್ ಮೂಲಕ Login ಆಗಿ **"NTSE Application Form"** ಎಂಬ link ಮೂಲಕ ಭರ್ತಿಮಾಡುವುದು, ಮಂಡಳಿಯ ವೆಬ್‌ಸೈಟ್‌ನ ಮುಖ ಪುಟದಲ್ಲಿನ **NTSE** Login ಮೂಲಕ Login ಆದಾಗ ಅರ್ಜಿ ಭರ್ತಿ ಮಾಡುವ ಮೊದಲು ಗೋಚರಿಸುವ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಂಡು ಅರ್ಜಿ ಭರ್ತಿಮಾಡಬೇಕು.
- ಸರ್ಕಾರಿ, ಅನುದಾನಿತ, ಅನುದಾನರಹಿತ ಮತ್ತು ಸ್ಥಳೀಯ ಸಂಸ್ಥೆಗಳ ಪ್ರೌಢಶಾಲೆಯ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು NTS ಪರೀಕ್ಷೆಗೆ ಅರ್ಜಿ ಸಲ್ಲಿಸಲು https://sslc.karnataka.gov.in/ ವೆಬ್‌ಸೈಟ್‌ನಲ್ಲಿ ತಮ್ಮ ಶಾಲೆಯ **UDISE** Code ಮೂಲಕ Login ಆಗುವುದು. ನಂತರ NTS ಪರೀಕ್ಷೆಗೆ ಅರ್ಜಿ ಸಲ್ಲಿಸುವ Menu ಅನ್ನು Click ಮಾಡುವುದು. ಆಗ ಅರ್ಜಿ ನಮೂನೆಯು Open ಆಗುತ್ತದೆ.

- ಮೊಬೈಲ್ ಸಂಖ್ಯೆಯಲ್ಲಿ ಬದಲಾವಣೆಯಿದ್ದಲ್ಲಿ ಈ ಕಛೇರಿಯ ಇ–ಮೇಲ್ ವಿಳಾಸಕ್ಕೆ ksqaacntsenmms@gmil.com ಗೆ ಪತ್ರ ವ್ಯವಹಾರವನ್ನು ಮಾಡಿ ಮೊಬೈಲ್ ಸಂಖ್ಯೆಯನ್ನು ಬದಲಾಯಿಸಿಕೊಳ್ಳುವುದು.
- **ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ಯಾವುದೇ ಕಾರಣಕ್ಕೂ ಅರ್ಜಿಸಲ್ಲಿಸಲು ವಿದ್ಯಾರ್ಥಿಗಳಿಗೆ ತಮ್ಮ ಶಾಲೆಯ User Name ಮತ್ತು Password ಅನ್ನು ನೀಡುವಂತಿಲ್ಲ ಹಾಗೂ ವಿದ್ಯಾರ್ಥಿಗಳಿಂದ ಮಾಹಿತಿಗಳನ್ನು ಪಡೆದು ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರೇ ಕಡ್ಡಾಯವಾಗಿ ಶಾಲಾಹಂತದಲ್ಲಿಯೇ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಭರ್ತಿ ಮಾಡುವುದು.**
- ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ಅರ್ಜಿ ಸಲ್ಲಿಸುವ ವಿದ್ಯಾರ್ಥಿಯ SATS ಸಂಖ್ಯೆಯನ್ನು ನಮೂದಿಸುವುದು. ನಮೂದಿಸಲ್ಪಟ್ಟ SATS ಸಂಖ್ಯೆಯನ್ನು ಆಧರಿಸಿ ಸಂಬಂಧಿಸಿದ ವಿದ್ಯಾರ್ಥಿ ಮತ್ತು ಶಾಲಾ **ಮಾಹಿತಿಯು** ಲಭ್ಯವಾಗುತ್ತದೆ. (ಕ್ರಮ ಸಂಖ್ಯೆ 1 ರಿಂದ 11ರ ವಿವರಗಳು) **ಶಾಲೆಯ ವಿಳಾಸಕ್ಕೆ ಸಂಬಂಧಿಸಿದ ಪಿನ್‌ಕೋಡ್ ನಮೂದಿಸಲು ಅವಕಾಶವನ್ನು ನೀಡಲಾಗಿದ್ದು, ಪಿನ್ ಕೋಡ್‌ನ್ನು ನಮೂದಿಸುವುದು ಕಡ್ಡಾಯವಾಗಿರುತ್ತದೆ.** ಅರ್ಜಿ ಭರ್ತಿ ಮಾಡುವ ಸಂದರ್ಭದಲ್ಲಿ **SATS ನಲ್ಲಿನ ಮಾಹಿತಿಗಳಿಗೆ ಸಂಬಂಧಿಸಿದಂತೆ ಯಾವುದೇ ತಿದ್ದುಪಡಿಗಳಿಗೆ ಅವಕಾಶವಿರುವುದಿಲ್ಲ.** ಒಂದು ವೇಳೆ ತಿದ್ದುಪಡಿಗಳಿದ್ದಲ್ಲಿ SATS ನಲ್ಲಿ ಮೊದಲು ತಿದ್ದುಪಡಿ ಮಾಡಬೇಕು, ನಂತರ ಸದರಿ ತಿದ್ದುಪಡಿ ಮಾಹಿತಿಗಳು NTS ಪರೀಕ್ಷೆಯ Edit Form ನಲ್ಲಿ Synchronize SATS Data ಎಂಬ Tab ಅನ್ನು Click ಮಾಡಿದಲ್ಲಿ ತಿದ್ದುಪಡಿಯಾದ ಮಾಹಿತಿಗಳು ಗೋಚರಿಸುತ್ತವೆ. ತಿದ್ದುಪಡಿಯಾದ ಮಾಹಿತಿಗಳು Update ಆಗಿರುವ ಬಗ್ಗೆ ಖಾತ್ರಿಪಡಿಸಿಕೊಂಡ ನಂತರ ಅರ್ಜಿ ಸಲ್ಲಿಸುವುದು.
- ಅರ್ಜಿಯಲ್ಲಿನ ಕ್ರಮ ಸಂಖ್ಯೆ 12ರಿಂದ ವಿದ್ಯಾರ್ಥಿಯ ಮಾಹಿತಿಯನ್ನು ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರೇ ತಪ್ಪದೇ ಭರ್ತಿ ಮಾಡಬೇಕು. ಅರ್ಜಿ ಸಲ್ಲಿಸಿದ ನಂತರ **ಅರ್ಜಿ ಪ್ರತಿ ಹಾಗೂ ಪೂರಕ ಪ್ರಮಾಣ ಪತ್ರಗಳ ಒಂದು ಸೆಟ್ ದಾಖಲೆಗಳನ್ನು ಶಾಲೆಯಲ್ಲಿ ಕಾಯ್ದಿರಿಸುವುದು ಕಡ್ಡಾಯ. ಅರ್ಜಿಯ ಪ್ರತಿ, ಚಲನ್ ಹಾಗೂ ಇತರ ಯಾವುದೇ ಪ್ರಮಾಣ ಪತ್ರಗಳನ್ನು ಈ ಕಛೇರಿಗೆ ಕಳುಹಿಸುವಂತಿಲ್ಲ.**
- ಈ ಪರೀಕ್ಷೆಗೆ ಅರ್ಜಿ ಸಲ್ಲಿಸುವ SC,ST, ಇತರೆ ಹಿಂದುಳಿದ ವರ್ಗ (OBC), ಆರ್ಥಿಕವಾಗಿ ಹಿಂದುಳಿದ ವರ್ಗಕ್ಕೆ (Economically Weaker Sections-EWSs) ಹಾಗೂ ವಿಕಲಚೇತನ ಅಭ್ಯರ್ಥಿಗಳು ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು.
- SC,ST ಮೀಸಲಾತಿ ಕೋರುವ ವಿದ್ಯಾರ್ಥಿಗಳ ಜಾತಿ ಪ್ರಮಾಣ ಪತ್ರವನ್ನು, ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ವಿದ್ಯಾರ್ಥಿಗಳಿಂದ ಪಡೆದು ಪ್ರಮಾಣ ಪತ್ರದಲ್ಲಿರುವ RD Number ಸಂಖ್ಯೆಯನ್ನು ಕಡ್ಡಾಯವಾಗಿ ಆನ್‌ಲೈನ್ ಅರ್ಜಿಯಲ್ಲಿ ಭರ್ತಿ ಮಾಡುವುದು.
- **ಇತರೆ ಹಿಂದುಳಿದ ವರ್ಗದ (OBC) ವಿದ್ಯಾರ್ಥಿಗಳು ಮತ್ತು ಆರ್ಥಿಕವಾಗಿ ಹಿಂದುಳಿದ ವರ್ಗದ (Economically Weaker Sections-EWSs) ವಿದ್ಯಾರ್ಥಿಗಳ NTS ಪರೀಕ್ಷೆಯ ಆಯ್ಕೆ ಪ್ರಕ್ರಿಯೆಯಲ್ಲಿನ ಮೀಸಲಾತಿಗೆ ಸಂಬಂಧಿಸಿದಂತೆ ಉಲ್ಲೇಖ–2 ರ NCERT ಪತ್ರದಲ್ಲಿ ಈ ರೀತಿ ತಿಳಿಸಿರುತ್ತಾರೆ. The programme coordinator discussed the issue of reservation of OBCs and EWS categories. It was informed to states that in NTS Stage-I exam the states may follow their state reservation policy but for Stage-II exam central reservation policy of GoI will be followed. The candidate will be considered under OBC category at Stage-II exam only if his caste falls in central list of OBCs otherwise he will be considered as General category students for Stage-II exam. The state has to submit EWS certificate as per the central Govt. rules, to claim reservation. If there is shortfall of selected candidates in EWS category, then that shortfall may be completed by taking students from General category students. ಈ ವಿಷಯಕ್ಕೆ ಸಂಬಂಧಿಸಿದಂತೆ ಶಾಲಾ ಮುಖ್ಯಶಿಕ್ಷಕರು/ಪ್ರಾಂಶುಪಾಲರು ಗಮನಹರಿಸುವುದು ಹಾಗೂ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಡಿ.ಎಸ್.ಇ.ಆರ್.ಟಿ, ಬೆಂಗಳೂರು ರವರನ್ನು ಸಂಪರ್ಕಿಸುವುದು.**
- ಇತರೆ ಹಿಂದುಳಿದ ವರ್ಗದ (OBC) ಮೀಸಲಾತಿ ಕೋರುವ ವಿದ್ಯಾರ್ಥಿಗಳು **ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಸಲ್ಲಿಸುವುದು** ಕಡ್ಡಾಯವಾಗಿರುತ್ತದೆ. ಹೊರ ರಾಜ್ಯದ OBC ಪ್ರವರ್ಗದಡಿಯಲ್ಲಿ ಮೀಸಲಾತಿ ಕೋರುವ ವಿದ್ಯಾರ್ಥಿಗಳು ಜಾತಿ ಹಾಗೂ ಆದಾಯ ಪ್ರಮಾಣ ಪತ್ರಗಳನ್ನು ಸಲ್ಲಿಸಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು. ಪ್ರಮಾಣ ಪತ್ರಗಳಲ್ಲಿರುವ RD

Numbeಡಿ/ ಸಂಖ್ಯೆಯನ್ನು ಆನ್‌ಲೈನ್ ಅರ್ಜಿಯಲ್ಲಿ ಕಡ್ಡಾಯವಾಗಿ ಭರ್ತಿ ಮಾಡುವುದು ಹಾಗೂ ಸಂಬಂಧಿಸಿದ ಪ್ರಮಾಣ ಪತ್ರವನ್ನು ಶಾಲಾ ಹಂತದಲ್ಲಿ ಕಾಯ್ದಿರಿಸುವುದು.

- ವಿದ್ಯಾರ್ಥಿಯು ಆರ್ಥಿಕವಾಗಿ ಹಿಂದುಳಿದ ವರ್ಗಕ್ಕೆ (Economically Weaker Sections-EWSs) ಸೇರಿದ್ದಲ್ಲಿ, ಸಕ್ಷಮ ಪ್ರಾಧಿಕಾರದಿಂದ ಪಡೆದ Income and asset certificate ಅನ್ನು ಹೊಂದಿರುವುದು ಕಡ್ಡಾಯ. ನಿಗದಿತ ಪ್ರಮಾಣ ಪತ್ರವನ್ನೇ ಸಲ್ಲಿಸಿರುವ ಬಗ್ಗೆ ಹಾಗೂ ಪ್ರಮಾಣ ಪತ್ರ ಚಾಲ್ತಿಯಲ್ಲಿರುವ ಬಗ್ಗೆ ಖಾತ್ರಿಪಡಿಸಿಕೊಂಡು ಅದರ RD Number/ ಸಂಖ್ಯೆಯನ್ನು ಕಡ್ಡಾಯವಾಗಿ ಭರ್ತಿ ಮಾಡುವುದು.
- ವಿದ್ಯಾರ್ಥಿಯ ವಿಕಲಚೇತನಕ್ಕೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರ (ಜಿಲ್ಲಾ ವೈದ್ಯಕೀಯ ಮಂಡಳಿ) ಪಡೆದ ಪ್ರಮಾಣ ಪತ್ರವನ್ನು ಆಧರಿಸಿ Disability Status ಅನ್ನು ನಮೂದಿಸುವುದು.
- SC,ST, OBC, EWSs ಹಾಗೂ ವಿಕಲಚೇತನ ಅಭ್ಯರ್ಥಿಗಳು ತಾವು ಕೋರುವ ಮೀಸಲಾತಿಗೆ ಸಂಬಂಧಿಸಿದಂತೆ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ ಸಲ್ಲಿಸುವ ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರದಿಂದ ಪರೀಕ್ಷೆಗೆ ಅರ್ಜಿ ಸಲ್ಲಿಸುವ ಪೂರ್ವದಲ್ಲಿ ಪಡೆದಿರಬೇಕು ಮತ್ತು ಸದರಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರಬೇಕು. ಈ ಬಗ್ಗೆ ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ಖಾತ್ರಿಪಡಿಸಿಕೊಂಡು ವಿದ್ಯಾರ್ಥಿಗಳ ಅರ್ಜಿಯನ್ನು ಭರ್ತಿಮಾಡಬೇಕು ಹಾಗೂ ಪ್ರಮಾಣ ಪತ್ರಗಳು ನೈಜತೆ ಮತ್ತು ಚಾಲ್ತಿಯಲ್ಲಿ ಇರದಿದ್ದಲ್ಲಿ ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರು/ಪ್ರಾಂಶುಪಾಲರೇ ಹೊಣೆಗಾರರಾಗಿರುತ್ತಾರೆ.
- ಮೀಸಲಾತಿಗೆ ಸಂಬಂಧಿಸಿದ ಪ್ರಮಾಣ ಪತ್ರಗಳ ಒಂದು ಪ್ರತಿಯನ್ನು ಮುಖ್ಯ ಶಿಕ್ಷಕರು/ಪ್ರಾಂಶುಪಾಲರು ವಿದ್ಯಾರ್ಥಿಗಳಿಂದ ಪಡೆದು ಶಾಲಾಹಂತದಲ್ಲಿ ಕಾಯ್ದಿರಿಸಬೇಕು ಹಾಗೂ ವಿದ್ಯಾರ್ಥಿಗಳಿಂದ ಪಡೆದು ಕಾಯ್ದಿರಿಸಿದ ದಾಖಲೆಗಳನ್ನು ಮುಂದಿನ ದಿನಗಳಲ್ಲಿ ಪರಿಶೀಲನೆಗಾಗಿ ಕಡ್ಡಾಯವಾಗಿ ಇಲಾಖೆಗೆ ನೀಡುವುದು.
- ವಿದ್ಯಾರ್ಥಿ/ನಿಯ ಬ್ಯಾಂಕ್ ಖಾತೆಗೆ ಸಂಬಂಧಿಸಿದ ಮಾಹಿತಿಗಳನ್ನು ನಮೂದಿಸುವುದು (ಬ್ಯಾಂಕ್ ಖಾತೆಯ ಸಂಖ್ಯೆ, ಬ್ಯಾಂಕ್ ಹೆಸರು, ಬ್ಯಾಂಕ್ ಶಾಖೆ, ಬ್ಯಾಂಕ್ IFSC Code).
- ವಿದ್ಯಾರ್ಥಿ/ನಿಯ Photo ಮತ್ತು ಸಹಿಯನ್ನು ಅರ್ಜಿ ಭರ್ತಿ ಮಾಡುವ ಮೊದಲೇ JPEG Format ನಲ್ಲಿ Scan ಮಾಡಿಟ್ಟುಕೊಳ್ಳುವುದು.
- ವಿದ್ಯಾರ್ಥಿ/ನಿ Photo (Size 60-80 kb) JPEG Format ನಲ್ಲಿ Upload ಮಾಡುವುದು.
- ವಿದ್ಯಾರ್ಥಿ/ನಿ ಸಹಿಯನ್ನು (Size 20-50 kb) JPEG Format ನಲ್ಲಿ Upload ಮಾಡುವುದು.
- Number of Family members ಎಂಬಲ್ಲಿ ವಿದ್ಯಾರ್ಥಿ/ನಿಯ ತಂದೆ, ತಾಯಿ, ಸಹೋದರ, ಸಹೋದರಿಯರ ಸಂಖ್ಯೆಯನ್ನು ಮಾತ್ರ ನಮೂದಿಸುವುದು.
- ವಿದ್ಯಾರ್ಥಿ/ನಿಗೆ ಸಹೋದರ/ಸಹೋದರಿಯರು ಇಲ್ಲದಿದ್ದರೂ ಕೂಡ ಇದಕ್ಕಾಗಿ ನಿಗದಿಪಡಿಸಿರುವ ಬಾಕ್ಸ್ ನಲ್ಲಿ '0' ನಮೂದಿಸುವುದು ಕಡ್ಡಾಯ. ಆಗ ಮಾತ್ರ ಅರ್ಜಿ Submit ಆಗುತ್ತದೆ.
- ದೃಢೀಕರಣ ಭಾಗದಲ್ಲಿ ನೀಡಿರುವ ಅಂಶಗಳನ್ನು ಓದಿ ಸರಿಯಾಗಿರುವುದನ್ನು ಖಾತರಿ ಪಡಿಸಿಕೊಂಡು ನಂತರ ಎಡಭಾಗದಲ್ಲಿ ನೀಡಿರುವ Check Box ಗೆ [√] ಗುರುತು ಮಾಡಿ 'Submit' ಮಾಡುವುದು.
- ಪ್ರತಿ ವಿದ್ಯಾರ್ಥಿಗೆ ತಲಾ 5 ರೂ ನಂತೆ ನಿರ್ವಹಣಾ ವೆಚ್ಚವನ್ನು ಶಾಲಾ ಮುಖ್ಯ ಶಿಕ್ಷಕರು ತಮ್ಮ ಹಂತದಲ್ಲಿಯೇ ಉಳಿಸಿಕೊಂಡು ಉಳಿದ ಮೊತ್ತವನ್ನು ಬ್ಯಾಂಕಿಗೆ **Download** ಮಾಡಿಕೊಂಡ ಚಲನ್ ಮೂಲಕ ಪಾವತಿಸುವುದು.
- ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗಾಗಿ ಅರ್ಜಿಯನ್ನು ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕ ಮುಕ್ತಾಯವಾದ ನಂತರ ವಿದ್ಯಾರ್ಥಿಗಳಿಂದ ಸಂಗ್ರಹಿಸಿದ ಪರೀಕ್ಷಾ ಶುಲ್ಕವನ್ನು ಏಕಕಂತಿನಲ್ಲಿ ಶಾಲಾ ಲಾಗಿನ್‌ನಲ್ಲಿ **ಜನರೇಟ್ ಚಲನ್ ಕ್ಲಿಕ್** ಮಾಡಿದಾಗ **ಅರ್ಜಿ ಸಲ್ಲಿಸಿದ ಪ್ರತಿ ವಿದ್ಯಾರ್ಥಿಗೆ ರೂ 5/– ನಿರ್ವಹಣಾ ವೆಚ್ಚ** ವನ್ನು **ಹೊರತುಪಡಿಸಿ ಜನರೇಟ್ ಆಗುತ್ತದೆ ಚಲನ್** ಬಳಸಿ ಐದು ದಿನಗಳ ಒಳಗಾಗಿ **ಕೆನರಾ ಬ್ಯಾಂಕಿನ ರಾಜ್ಯದ ಯಾವುದೇ Branch** ನಲ್ಲಿ ಪಾವತಿಸುವುದು.
- **ಶುಲ್ಕವನ್ನು ರಾಜ್ಯದ ಯಾವುದೇ ಕೆನರಾ ಬ್ಯಾಂಕ್ ಶಾಖೆಯಲ್ಲಿ ಮಾತ್ರ ಪಾವತಿಸುವುದು ಇತರೆ ಬ್ಯಾಂಕ್‌ಗಳಲ್ಲಿ ಪಾವತಿಸುವಂತಿಲ್ಲ.**

- ಪರೀಕ್ಷೆಯ ಪ್ರವೇಶ ಪತ್ರವನ್ನು ಪರೀಕ್ಷಾ ದಿನಾಂಕದ 15 ದಿನಗಳ ಮುಂಚಿತವಾಗಿ ಶಾಲಾ Login ಗೆ Upload ಮಾಡಲಾಗುವುದು. Login ಆಗಿ Download ಮಾಡಿಕೊಳ್ಳುವುದು ಹಾಗೂ ಮಾಹಿತಿಯು ಸರಿಯಿರುವ ಬಗ್ಗೆ ಪರಿಶೀಲಿಸಿಕೊಳ್ಳುವುದು ನಂತರ ವಿದ್ಯಾರ್ಥಿಗಳಿಗೆ ವಿತರಿಸುವುದು.
- **ದೂರ ಶಿಕ್ಷಣ ಮಾದರಿಯಲ್ಲಿ (Open and Distance Learning (ODL) ಪ್ರಸಕ್ತ ಸಾಲಿನಲ್ಲಿ 10ನೇ ತರಗತಿಗೆ ನೋಂದಾಯಿಸಿಕೊಂಡಿರುವ ವಿದ್ಯಾರ್ಥಿಗಳು ಕೆ.ಎಸ್.ಇ.ಇ.ಬಿ ವೆಬ್‌ಸೈಟ್‌ನಲ್ಲಿ ದೊರೆಯುವ ಅರ್ಜಿಯನ್ನು Download ಮಾಡಿ ಮುದ್ರಿಸಿಕೊಂಡು ಭೌತಿಕವಾಗಿ ಅರ್ಜಿಯನ್ನು ಭರ್ತಿ ಮಾಡಿ ಕ್ಷೇತ್ರಶಿಕ್ಷಣಾಧಿಕಾರಿಗಳಿಂದ ಮೇಲುರುಜು ಪಡೆದು ಕಲಿಕಾ ಕೇಂದ್ರದ ಸಮನ್ವಯಾಧಿಕಾರಿಗಳ ಮೂಲಕ ಅರ್ಜಿ ಮತ್ತು ದೃಢೀಕರಿಸಿದ ಪ್ರಮಾಣ ಪತ್ರಗಳನ್ನು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಕೆ.ಎಸ್.ಕ್ಯು.ಎ.ಎ.ಸಿ ವಿಭಾಗ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003 ಇಲ್ಲಿಗೆ ನೋಂದಾಯಿತ ಅಂಚೆಯ ಮೂಲಕ ಅರ್ಜಿ ಸಲ್ಲಿಸಲು ನೀಡಲಾದ ಅಂತಿಮ ದಿನಾಂಕ ಮುಗಿದ 5 ದಿನದೊಳಗಾಗಿ ಅರ್ಜಿ, ಅಗತ್ಯ ಪ್ರಮಾಣ ಪತ್ರಗಳು ಹಾಗೂ ಶುಲ್ಕ ಪಾವತಿದ ಚಲನ್ ಪ್ರತಿಯನ್ನು ಸಲ್ಲಿಸುವುದು. ಸದರಿ ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಿರುವ ಚಲನ್ ಮೂಲಕ ನಿಗಧಿತ ಪರೀಕ್ಷಾ ಶುಲ್ಕವನ್ನು ರಾಜ್ಯದ ಕೆನರಾ ಬ್ಯಾಂಕಿನ ಯಾವುದೇ ಶಾಖೆಯಲ್ಲಿ ಈ ಕಛೇರಿಯ ಬ್ಯಾಂಕ್ ಖಾತೆಯಾದ CANARA BANK SB. A/C No 0409101202128, IFSC Code - CNRB0000409ಗೆ ಪಾವತಿಸಿ ಮೂಲ ಚಲನ್‌ನನ್ನು ಅರ್ಜಿಯೊಂದಿಗೆ ಮಂಡಳಿಗೆ ಸಲ್ಲಿಸುವುದು. ಅರ್ಜಿಗಳು ಈ ಕಛೇರಿಯಲ್ಲಿ ಸ್ವೀಕೃತಗೊಂಡ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶ ಪತ್ರವನ್ನು ವಿತರಿಸಲಾಗುವುದು.**
- ಅರ್ಜಿ Submit ಮಾಡಿದ ನಂತರ Edit Option ನೀಡಲಾಗಿದೆ. ಅರ್ಜಿ ಸಲ್ಲಿಸಿದ ನಂತರವೂ ಅರ್ಜಿಯಲ್ಲಿ ನಮೂದು(Entry) ಮಾಡಲಾಗಿರುವ ಮಾಹಿತಿಗಳಲ್ಲಿ ತಿದ್ದುಪಡಿಗಳಿದ್ದಲ್ಲಿ ಕ್ರಮ ಸಂಖ್ಯೆ 1 ರಿಂದ 11ರ ವಿವರಗಳನ್ನು SATS ನಲ್ಲಿ ಹಾಗೂ ಕ್ರ.ಸಂ. 12 ರ ನಂತರದ ಮಾಹಿತಿಗಳನ್ನು NTSE Application Edit Form Button Click ಮಾಡಿ ತಿದ್ದುಪಡಿ ಮಾಡಿ ಅರ್ಜಿಯನ್ನು ಮತ್ತೊಮ್ಮೆ Submit ಮಾಡಲು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದವರೆಗೂ ಅವಕಾಶ ಕಲ್ಪಿಸಲಾಗಿದ್ದು ಕೊನೆಯ ದಿನಾಂಕ ಮುಕ್ತಾಯವಾದ ನಂತರ ಯಾವುದೇ ತಿದ್ದುಪಡಿಗಳಿಗೆ ಅವಕಾಶವಿರುವುದಿಲ್ಲ.
- ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಸಂಭವಿಸುವ ತಾಂತ್ರಿಕ ಅಡಚಣೆ ಹಾಗೂ ಇನ್ನಿತರ ಮಾಹಿತಿಗಳಿಗಾಗಿ ಕಛೇರಿ ಕರ್ತವ್ಯದ ಸಮಯದಲ್ಲಿ ಈ ಕಛೇರಿಯ ದೂರವಾಣಿ ಸಂಖ್ಯೆ :080-**23341615 ಗೆ** ಕರೆ ಮಾಡುವುದು ಮತ್ತು ಸಮಸ್ಯೆಯ ವಿವರವನ್ನು ಈ ಕಛೇರಿಯ ಇ-ಮೇಲ್ ವಿಳಾಸವಾದ **ksqaacntsenmms@gmail.com** ಗೆ ಕಳುಹಿಸುವುದು.

## NTS ಪರೀಕ್ಷಾ ಕಾರ್ಯದಲ್ಲಿ ಉಪನಿರ್ದೇಶಕರು (ಆಡಳಿತ) ರವರ ಜವಾಬ್ದಾರಿಗಳು:-

- NTS ಪರೀಕ್ಷೆಯ ರೂಪುರೇಷೆ ಹಾಗೂ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಉಪನಿರ್ದೇಶಕರು (ಅಭಿವೃದ್ಧಿ) ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳ ಸಭೆ ಕರೆದು ಸಂಪೂರ್ಣ ಮಾಹಿತಿ ಒದಗಿಸುವುದು.
- NTS ಪರೀಕ್ಷೆಯ ಬಗ್ಗೆ ಮಾಧ್ಯಮಗಳಲ್ಲಿ ಜಾಹೀರಾತು/ಪ್ರಕಟಣೆ ನೀಡಿ ಪರೀಕ್ಷೆಯ ಮಹತ್ವವನ್ನು ಪ್ರಚಾರ ಮಾಡುವುದು. ಆ ಮೂಲಕ ಹೆಚ್ಚಿನ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆಗೆ ಹಾಜರಾಗುವಂತೆ ಕ್ರಮವಹಿಸುವುದು ಹಾಗೂ ಪತ್ರಿಕಾ ಪ್ರಕಟಣೆಯ ಒಂದು ಪ್ರತಿಯನ್ನು ಕೆ.ಎಸ್.ಕ್ಯು.ಎ.ಎ.ಸಿ ಕಛೇರಿಗೆ ಇ-ಮೇಲ್ ಮೂಲಕ ಕಳುಹಿಸುವುದು.
- **ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ಪ್ರಸಕ್ತ ಸಾಲಿನಲ್ಲಿ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಈ ಹಿಂದಿನ ತರಗತಿ ಅಂದರೆ 9ನೇ ತರಗತಿಯಲ್ಲಿ A+ ಮತ್ತು A ಗ್ರೇಡ್ ಪಡೆದ ಎಲ್ಲಾ ವಿದ್ಯಾರ್ಥಿಗಳು ಕಡ್ಡಾಯವಾಗಿ ಅರ್ಜಿ ಸಲ್ಲಿಸಲು ಅಗತ್ಯ ಕ್ರಮವಹಿಸಲು ಉಲ್ಲೇಖ-4ರ ನಡಾವಳಿಯಲ್ಲಿ ಮಾನ್ಯ ಆಯುಕ್ತರು ತಿಳಿಸಿರುತ್ತಾರೆ. ಹಾಗಾಗಿ ಈ ಸಂಬಂಧ ಅಗತ್ಯ ಕ್ರಮವಹಿಸುವುದು.**
- ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಭೆ ಕರೆದು ಪರೀಕ್ಷೆ ಬಗ್ಗೆ ಮಾಹಿತಿ ನೀಡುವುದು.
- ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸುವುದು.
- ಆಯಾ ತಾಲ್ಲೂಕಿನ ಪರೀಕ್ಷೆಯ ಸಂಪೂರ್ಣ ಜವಾಬ್ದಾರಿಯನ್ನು ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ವಹಿಸುವುದು ಹಾಗೂ ಮೇಲುಸ್ತುವಾರಿ ಮಾಡುವುದು.

## NTS ಪರೀಕ್ಷಾ ಕಾರ್ಯದಲ್ಲಿ ಉಪನಿರ್ದೇಶಕರು (ಅಭಿವೃದ್ಧಿ) ರವರ ಜವಾಬ್ದಾರಿಗಳು:-

- NTS ಪರೀಕ್ಷೆಯನ್ನು ವ್ಯವಸ್ಥಿತವಾಗಿ ನಡೆಸುವ ಬಗ್ಗೆ ಸಂಪೂರ್ಣ ಉಸ್ತುವಾರಿ ವಹಿಸುವುದು.
- NTS ಪರೀಕ್ಷೆಯ ಬಗ್ಗೆ ಮಾಧ್ಯಮಗಳಲ್ಲಿ ಜಾಹೀರಾತು/ಪ್ರಕಟಣೆ ನೀಡಿ ಪರೀಕ್ಷೆಯ ಮಹತ್ವವನ್ನು ಪ್ರಚಾರ ಮಾಡುವುದು. ಆ ಮೂಲಕ ಹೆಚ್ಚಿನ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆಗೆ ಹಾಜರಾಗುವಂತೆ ಕ್ರಮವಹಿಸುವುದು ಹಾಗೂ ಪತ್ರಿಕಾ ಪ್ರಕಟಣೆಯ ಒಂದು ಪ್ರತಿಯನ್ನು ಕೆ.ಎಸ್.ಕ್ಯು.ಎ.ಎ.ಸಿ ಕಛೇರಿಗೆ ಇ-ಮೇಲ್ ಮೂಲಕ ಕಳುಹಿಸುವುದು.
- **ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ಪ್ರಸಕ್ತ ಸಾಲಿನಲ್ಲಿ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಈ ಹಿಂದಿನ ತರಗತಿ ಅಂದರೆ 9ನೇ ತರಗತಿಯಲ್ಲಿ A+ ಮತ್ತು A ಗ್ರೇಡ್ ಪಡೆದ ಎಲ್ಲಾ ವಿದ್ಯಾರ್ಥಿಗಳು ಕಡ್ಡಾಯವಾಗಿ ಅರ್ಜಿ ಸಲ್ಲಿಸಲು ಅಗತ್ಯ ಕ್ರಮವಹಿಸಲು ಮಾನ್ಯ ಆಯುಕ್ತರು ಉಲ್ಲೇಖ- 4ರ ಸಭಾ ನಡವಳಿಯಲ್ಲಿ ತಿಳಿಸಿರುತ್ತಾರೆ. ಹಾಗಾಗಿ ಅಂತಹ ಎಲ್ಲಾ ವಿದ್ಯಾರ್ಥಿಗಳಿಂದ ಅರ್ಜಿ ಸಲ್ಲಿಸಲಾಗಿದೆಯೇ ಎಂಬುದನ್ನು ಖಾತ್ರಿಪಡಿಸಿಕೊಳ್ಳುವುದು. ಈ ಬಗ್ಗೆ ಉಪನಿರ್ದೇಶಕರು(ಆಡಳಿತ) ರವರೊಂದಿಗೆ ಸಮನ್ವಯ ಸಾಧಿಸುವುದು.**
- ಜಿಲ್ಲಾ ಹಂತದಲ್ಲಿ ಸದರಿ ಪರೀಕ್ಷೆ ಆಯೋಜನೆಗೆ ಜಿಲ್ಲಾ ಹಂತದ ನೋಡಲ್ ಅಧಿಕಾರಿಯನ್ನು ನೇಮಿಸುವುದು.
- ತಮ್ಮ ಜಿಲ್ಲಾ ವ್ಯಾಪ್ತಿಯ ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಭೆ ಕರೆದು ಪರೀಕ್ಷೆಯ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವುದು.
- ಗರಿಷ್ಠ ಪ್ರಮಾಣದ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿ ಸಲ್ಲಿಸಲು ಅಗತ್ಯ ಕ್ರಮವಹಿಸುವುದು.
- ಅಗತ್ಯ ಸಂಖ್ಯೆಯ ಪರೀಕ್ಷಾ ಕೇಂದ್ರಗಳನ್ನು ಗುರ್ತಿಸಿ ರಾಜ್ಯ ಕಛೇರಿಗೆ ಸಲ್ಲಿಸುವುದು.
- ಪರೀಕ್ಷಾ ಸಂಬಂಧ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕೆ.ಎಸ್.ಕ್ಯು.ಎ.ಎ.ಸಿಯ ಸೂಚನೆಯಂತೆ ಸಭೆಗಳಿಗೆ ನೋಡಲ್ ಅಧಿಕಾರಿಯು ಹಾಜರಾಗುವಂತೆ ಕ್ರಮವಹಿಸುವುದು.
- ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸುವುದು.
- ಪರೀಕ್ಷಾ ಸಂಬಂಧ ಬಿಡುಗಡೆಯಾಗುವ ಅನುದಾನದಲ್ಲಿ ನಿಯಮನುಸಾರ ವೆಚ್ಚಭರಿಸಿ, ಲೆಕ್ಕಪತ್ರಗಳನ್ನು ನಿರ್ವಹಿಸುವುದು ಹಾಗೂ ನಿಗದಿತ ಸಮಯದೊಳಗೆ ಉಪಯೋಗಿತ ಪ್ರಮಾಣ ಪತ್ರವನ್ನು ನೀಡುವುದು.

## NTS ಪರೀಕ್ಷಾ ಕಾರ್ಯದಲ್ಲಿ ಆಯೋಜನೆಯಲ್ಲಿ ಕ್ಷೇತ್ರಶಿಕ್ಷಣಾಧಿಕಾರಿಗಳ ಜವಾಬ್ದಾರಿಗಳು:-

- ತಾಲ್ಲೂಕಿನ ಎಲ್ಲಾ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರ ಸಭೆಯನ್ನು ಆಯೋಜಿಸಿ NTS ಪರೀಕ್ಷೆಯ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ಹಾಗೂ ಪ್ರತಿ ಶಾಲೆಯಿಂದ ವಿದ್ಯಾರ್ಥಿಗಳು ಗರಿಷ್ಠ ಪ್ರಮಾಣದಲ್ಲಿ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆ ಬರೆಯಲು ಕ್ರಮವಹಿಸುವುದು.
- NTS ಪರೀಕ್ಷೆಯ ಬಗ್ಗೆ ಮಾಧ್ಯಮಗಳಲ್ಲಿ ಜಾಹೀರಾತು/ಪ್ರಕಟಣೆ ನೀಡಿ ಪರೀಕ್ಷೆಯ ಮಹತ್ವವನ್ನು ಪ್ರಚಾರ ಮಾಡುವುದು. ಆ ಮೂಲಕ ಹೆಚ್ಚಿನ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷೆಗೆ ಹಾಜರಾಗುವಂತೆ ಕ್ರಮವಹಿಸುವುದು.
- **ಪ್ರಸ್ತುತ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಈ ಹಿಂದಿನ ತರಗತಿ ಅಂದರೆ 9ನೇ ತರಗತಿಯಲ್ಲಿ A+ ಮತ್ತು A ಗ್ರೇಡ್ ಪಡೆದ ಎಲ್ಲಾ ವಿದ್ಯಾರ್ಥಿಗಳು ಕಡ್ಡಾಯವಾಗಿ ಅರ್ಜಿ ಸಲ್ಲಿಸಲು ಅಗತ್ಯ ಕ್ರಮವಹಿಸಲು ಮಾನ್ಯ ಆಯುಕ್ತರು ಉಲ್ಲೇಖ-4 ರಲ್ಲಿ ತಿಳಿಸಿರುತ್ತಾರೆ. ಈ ಬಗ್ಗೆ ತಮ್ಮ ಬ್ಲಾಕ್ ಹಂತದ ಎಲ್ಲಾ ಶಾಲೆಗಳಿಗೆ ಮಾಹಿತಿ ನೀಡಿ ಅಗತ್ಯ ಕ್ರಮವಹಿಸುವುದು ಹಾಗೂ ಮುಖ್ಯ ಶಿಕ್ಷಕರ ಸಭೆ ಕರೆದು A+ ಮತ್ತು A ಗ್ರೇಡ್ ಪಡೆದ ಎಲ್ಲಾ ವಿದ್ಯಾರ್ಥಿಗಳ ಅರ್ಜಿಯನ್ನು ಕಡ್ಡಾಯವಾಗಿ ಸಲ್ಲಿಸಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳುವುದು.**
- ತಮ್ಮ ತಾಲ್ಲೂಕು ವ್ಯಾಪ್ತಿಯ ಪರೀಕ್ಷಾ ವ್ಯವಸ್ಥೆಯ ಸಂಪೂರ್ಣ ಜವಾಬ್ದಾರಿಯನ್ನು ಕ್ರಮಬದ್ಧವಾಗಿ ನಿರ್ವಹಿಸುವುದು.
- ಪರೀಕ್ಷೆ ನಡೆಯುವ ಸಂದರ್ಭದಲ್ಲಿ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸುವುದು.
- ಪರೀಕ್ಷೆಯ ಪೂರ್ವ ಮತ್ತು ಪರೀಕ್ಷಾ ಸಮಯದಲ್ಲಿನ ಕಾರ್ಯಚಟುವಟಿಕೆಗಳ ಅನುಷ್ಠಾನಕ್ಕೆ ಕ್ಷೇತ್ರಸಂಪನ್ಮೂಲ ಸಮನ್ವಯಾಧಿಕಾರಿ, ಇ.ಸಿ.ಒ, ಬಿ.ಆರ್.ಪಿ ಹಾಗೂ ಸಿ.ಆರ್.ಪಿಗಳಿಗೆ ಕಾರ್ಯ ಹಂಚಿಕೆಮಾಡಿ ಸಕ್ರಿಯವಾಗಿ ಕಾರ್ಯನಿರ್ವಹಿಸುವಂತೆ ಕ್ರಮವಹಿಸುವುದು.

- ಇದುವರೆಗೆ ಯಾವುದಾದರೂ ಶಾಲೆಯ ವಿದ್ಯಾರ್ಥಿಗಳನ್ನು SATS ನಲ್ಲಿ ನೋಂದಾಯಿಸದೇ ಇದ್ದಲ್ಲಿ ಕಡ್ಡಾಯವಾಗಿ ನೊಂದಾಯಿಸಲು ಕ್ರಮಕೈಗೊಂಡು ವಿದ್ಯಾರ್ಥಿಗಳು Online ನಲ್ಲಿ ಅರ್ಜಿ ಸಲ್ಲಿಸಲು ತಕ್ಷಣ ಕ್ರಮಕೈಗೊಳ್ಳುವುದು.

**ವಿಶೇಷ ಸೂಚನೆ:–** ಮುಖ್ಯ ಶಿಕ್ಷಕರು/ಪ್ರಾಂಶುಪಾಲರು **Online** ಅರ್ಜಿಯಲ್ಲಿನ ಎಲ್ಲಾ ಅಂಶಗಳನ್ನು ಕಡ್ಡಾಯವಾಗಿ ಭರ್ತಿ ಮಾಡಬೇಕು. ಅರ್ಜಿಯನ್ನು ಭರ್ತಿ ಮಾಡಿದ ನಂತರ ಎಲ್ಲಾ ಮಾಹಿತಿಗಳು ಸರಿ ಇರುವುದನ್ನು ಖಾತ್ರಿ ಪಡಿಸಿಕೊಂಡು Submit ಮಾಡುವುದು. ಅರ್ಜಿಯನ್ನು Submit ಮಾಡಿದ ನಂತರ ಅರ್ಜಿಯ ಪ್ರತಿ (Report) ಯನ್ನು ಮತ್ತು ಪೂರಕ ದಾಖಲೆಗಳ ಒಂದು ಪ್ರತಿಯನ್ನು ಮುದ್ರಿಸಿಕೊಂಡು (Printout) ಶಾಲೆಯಲ್ಲಿ ಕಾಯ್ದಿರಿಸುವುದು. ಅರ್ಜಿಯಲ್ಲಿ ಯಾವುದೇ ತಪ್ಪು, ಅಪೂರ್ಣ ಮಾಹಿತಿಗಳಿದ್ದಲ್ಲಿ ಸಂಬಂಧಪಟ್ಟ ಶಾಲೆಯ ಮುಖ್ಯಸ್ಥರೇ ಹೊಣೆಗಾರರಾಗಿರುತ್ತಾರೆ.

ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ 10/11/21

ಪ್ರತಿಯನ್ನು:–

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ.
2. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ.
3. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ– ಕರ್ನಾಟಕ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ.
4. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ.
5. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ.
6. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಸಂಸ್ಥೆ, ಬೆಂಗಳೂರು ರವರಿಗೆ ಮಾಹಿತಿಗಾಗಿ.
7. ನಿರ್ದೇಶಕರು ಪ್ರಾಥಮಿಕ ಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ ಮಾಹಿತಿಗಾಗಿ.
8. ನಿರ್ದೇಶಕರು ಉರ್ದು ಮತ್ತು ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ ಮಾಹಿತಿಗಾಗಿ.
9. ನಿರ್ದೇಶಕರು ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ ಮಾಹಿತಿಗಾಗಿ.
10. ಕಛೇರಿ ಪ್ರತಿ.

ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:–

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ),ಸಾ.ಶಿ.ಇ. ರವರಿಗೆ.
2. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಅಭಿವೃದ್ಧಿ), ಸಾ.ಶಿ.ಇ. ರವರಿಗೆ.
3. ರಾಜ್ಯದ ಎಲ್ಲಾ ಬ್ಲಾಕ್‌ಗಳ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾ.ಶಿ.ಇ. ರವರಿಗೆ.
4. ಎಲ್ಲಾ ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರು/ಪ್ರಾಂಶುಪಾಲರಿಗೆ (ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾ.ಶಿ.ಇ ರವರ ಮೂಲಕ).